# All India Radio: Bangalore
# National Bulletin In Kannada
# 30.03.2025 13.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಹಬ್ಬಗಳ ಆಚರಣೆಯ ವೈವಿಧ್ಯತೆ ನಡುವೆ ಏಕತೆಯ ಭಾವವನ್ನು ಬಲಪಡಿಸುತ್ತಾ ಸಾಗುವಂತೆ ಮನ್ ಕಿ ಬಾತ್ ನಲ್ಲಿ ಪ್ರಧಾನಿ ಕರೆ

೨. ನೈಸರ್ಗಿಕ ಸಂಪನ್ಮೂಲಗಳನ್ನು ಮುಂದಿನ ಪೀಳಿಗೆಗೆ ಸುರಕ್ಷಿತವಾಗಿ ವರ್ಗಾಯಿಸುವುದು ನಮ್ಮೆಲ್ಲರ ಹೊಣೆ - ಪ್ರಧಾನಿ ನರೇಂದ್ರ ಮೋದಿ

೩. ದೇಶಾದ್ಯಂತ ಇಂದು ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯಮಿ ಆಚರಣೆ

೪. ಮಹಾರಾಷ್ಟ್ರದ ನಾಗ್ಪುರದಲ್ಲಿ ಉನ್ನತ ದರ್ಜೆಯ ಮಾಧವ್ ನೇತ್ರಾಲಯ ಕೇಂದ್ರಕ್ಕೆ ಪ್ರಧಾನಿ ಶಂಕುಸ್ಥಾಪನೆ

೫. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಡೆಲ್ಲಿ ಕ್ಯಾಪಿಟಲ್ಸ್ - ಸನ್‌ರೈಸರ್ಸ್ ಹೈದರಾಬಾದ್ ಹಾಗೂ ರಾಜಸ್ಥಾನ್ ರಾಯಲ್ಸ್ - ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿ

****************

ಚೈತ್ರ ಮಾಸದ ಶುಕ್ಲ ಪಕ್ಷದ ಪಾಡ್ಯಮಿ ಇಂದು. ಚೈತ್ರ ನವರಾತ್ರಿ ಇಂದಿನಿಂದ ಪ್ರಾರಂಭವಾಗಲಿದ್ದು, ಈ ಬಾರಿ ವಿಕ್ರಮ ಸಂವತ್ಸರದ ಭಾರತೀಯ ನವ ವರ್ಷವೂ ಆರಂಭವಾಗುತ್ತಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ.

ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ 'ಮನ್ ಕಿ ಬಾತ್‌ನ' ೧೨೦ನೇ ಆವೃತ್ತಿಯಲ್ಲಿಂದು ದೇಶ-ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಯುಗಾದಿ ಹಬ್ಬಕ್ಕೆ ಜನತೆಗೆ ಶುಭಾಶಯ ಕೋರಿದರು.

ಬಿಹಾರ, ಬಂಗಾಳ, ಗುಜರಾತ್, ತಮಿಳುನಾಡು ಸೇರಿದಂತೆ ದೇಶದ ವಿವಿಧೆಡೆಯಿಂದ ಬಂದ ಪತ್ರಗಳನ್ನು ಉಲ್ಲೇಖಿಸಿರುವ ಪ್ರಧಾನಿ, ಆಸಕ್ತಿಕರವಾಗಿ ತಮ್ಮ ಮನದ ಮಾತುಗಳನ್ನು ವ್ಯಕ್ತಪಡಿಸಿದ್ದಾರೆ ಎಂದರು.

ಹಲವಾರು ಭಾಷೆಗಳಲ್ಲಿ ಅಭಿನಂದನಾ ಸಂದೇಶಗಳನ್ನು ಹೊತ್ತು ತಂದ ಶುಭ ಹಾರೈಕೆ ಪತ್ರಗಳನ್ನು ಓದಿದ ಪ್ರಧಾನಿ, ಆಯಾ ಭಾಷೆಗಳಲ್ಲಿಯೇ ಜನತೆಗೆ ಶುಭಾಶಯ ಕೋರಿದರು. ಇಂದು ಕರ್ನಾಟಕ, ಆಂಧ್ರಪ್ರದೇಶ ಮತ್ತು ತೆಲಂಗಾಣದಲ್ಲಿ ಯುಗಾದಿ, ಮಹಾರಾಷ್ಟ್ರದಲ್ಲಿ ಗುಡಿಪಾಡ್ವ ಹಬ್ಬವನ್ನು ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೩೪ ಸೆಕೆಂಡ್ಸ್)

ಈ ಸಂಭ್ರಮದ ವಾತಾವರಣದಲ್ಲಿಯೇ, ಈದ್ ಹಬ್ಬವೂ ಮೇಳೈಸಿದ್ದು, ಈ ತಿಂಗಳು ಪೂರ್ತಿ, ಹಬ್ಬಗಳು ಮತ್ತು ಆಚರಣೆಗಳಿಂದ ತುಂಬಿರಲಿವೆ. ನಮ್ಮ ಈ ಹಬ್ಬಗಳು ಬೇರೆ ಬೇರೆ ಪ್ರದೇಶಗಳಲ್ಲಿ ಆಚರಿಸಲ್ಪಡಬಹುದು ಆದರೆ, ಭಾರತದ ವೈವಿಧ್ಯತೆಯಲ್ಲಿಯೂ ಏಕತೆ ಹೇಗೆ ಬೆಸೆದುಕೊಂಡಿದೆ ಎಂಬುದನ್ನು ಅವು ತೋರ್ಪಡಿಸುತ್ತವೆ. ಈ ಏಕತೆಯ ಭಾವವನ್ನು ಎಲ್ಲರೂ ನಿರಂತರವಾಗಿ ಬಲಪಡಿಸುತ್ತಾ ಸಾಗಬೇಕು ಎಂದು ಕರೆ ನೀಡಿದರು.

ಪ್ರಸ್ತುತ ಮುಕ್ತಾಯಗೊಂಡ ಪರೀಕ್ಷೆಗಳ ಬಗ್ಗೆ ಪ್ರಸ್ತಾಪಿಸಿದ ಪ್ರಧಾನಿ, ಈಗ ಪರೀಕ್ಷೆಗಳು ಮುಗಿದಿದ್ದು, ಬೇಸಿಗೆ ರಜೆ ಆರಂಭವಾಗಲಿದೆ. ವರ್ಷದ ಈ ಅವಧಿಗಾಗಿ ಮಕ್ಕಳು ಕಾತುರದಿಂದ ಕಾಯುತ್ತಿರುತ್ತಾರೆ ಎಂದು ಹೇಳಿದರು.

ತಮ್ಮ ಬಾಲ್ಯದ ದಿನಗಳನ್ನು ನೆನಪಿಸಿಕೊಂಡ ಪ್ರಧಾನಿ, ಬಾಲ್ಯದಲ್ಲಿ ಏನನ್ನಾದರೂ ಕ್ರಿಯಾತ್ಮಕವಾಗಿ ಮಾಡಲು ಪ್ರಯತ್ನಿಸುತ್ತಿದ್ದೆವು. ಬೇಸಿಗೆಯ ದಿನಗಳು ಹೊಸ ಹವ್ಯಾಸ ಮೈಗೂಡಿಸಿಕೊಳ್ಳಲು ಹಾಗೂ ಕೌಶಲ್ಯಗಳನ್ನು ಮತ್ತಷ್ಟು ಅಭಿವೃದ್ಧಿಪಡಿಸಿಕೊಳ್ಳಲು ಸಕಾಲವಾಗಿದೆ ಎಂದರು.

ಮಕ್ಕಳು ಬಹಳಷ್ಟು ಕಲಿಯಬಹುದಾದ ವೇದಿಕೆಗಳಿಗೆ ಇಂದು ಕೊರತೆಯಿಲ್ಲ. ಇಷ್ಟೇ ಅಲ್ಲದೆ, ಈ ರಜಾದಿನಗಳಲ್ಲಿ ವಿವಿಧೆಡೆ ನಡೆಯುತ್ತಿರುವ ಸ್ವಯಂಸೇವಕ ಚಟುವಟಿಕೆಗಳು ಮತ್ತು ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲು ಮಕ್ಕಳಿಗೆ ಅವಕಾಶವಿರಲಿದೆ. ಯಾವುದೇ ಶಾಲೆ, ಸಾಮಾಜಿಕ ಸಂಸ್ಥೆ ಅಥವಾ ವಿಜ್ಞಾನ ಕೇಂದ್ರಗಳು ಇಂತಹ ಬೇಸಿಗೆ ಶಿಬಿರಗಳನ್ನು ಆಯೋಜಿಸುತ್ತಿದ್ದರೆ, ಅದನ್ನು #MyHolidays ನೊಂದಿಗೆ ಹಂಚಿಕೊಳ್ಳುವಂತೆ ತಿಳಿಸಿದರು.

ಮಕ್ಕಳು ಮತ್ತು ಅವರ ಪೋಷಕರು, ತಮ್ಮ ರಜಾದಿನಗಳ ಅನುಭವವನ್ನು #HolidayMemories ನೊಂದಿಗೆ ಹಂಚಿಕೊಳ್ಳಬೇಕು ಎಂದ ಪ್ರಧಾನಿ, ಮುಂಬರುವ 'ಮನದ ಮಾತಿ' ನಲ್ಲಿ ಇವುಗಳನ್ನು ಎಲ್ಲರೊಂದಿಗೆ ಹಂಚಿಕೊಳ್ಳುವ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಬೇಸಿಗೆ ರಜೆಗಾಗಿ ಸಿದ್ಧಪಡಿಸಲಾಗಿರುವ MY-Bharat ವಿಶೇಷ ಕ್ಯಾಲೆಂಡರ್ ಬಗ್ಗೆ ಪ್ರಸ್ತಾಪಿಸಿದ ಪ್ರಧಾನಿ, MY-Bharat ಅಧ್ಯಯನ ಪ್ರವಾಸದಲ್ಲಿ ಕೇಂದ್ರ ಸರ್ಕಾರದ 'ಜನೌಷಧಿ ಕೇಂದ್ರಗಳ ಕಾರ್ಯ ನಿರ್ವಹಣೆ', ವೈಬ್ರಂಟ್ ವಿಲೇಜ್ ಅಭಿಯಾನದಲ್ಲಿ ಪಾಲ್ಗೊಳ್ಳುವಿಕೆ, ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳು ಹಾಗೂ ಅಂಬೇಡ್ಕರ್ ಪುಣ್ಯತಿಥಿಯಂದು ನಡೆಯುವ ಮೆರವಣಿಗೆಯಲ್ಲಿ ಭಾಗವಹಿಸುವುದು ಸೇರಿದಂತೆ ಹಲವು ವಿಷಯಗಳ ಬಗ್ಗೆ ಮಾಹಿತಿ ಹೊಂದಿರಲಿದೆ ಎಂದರು.

ಬೇಸಿಗೆ ಕಾಲ ಆರಂಭವಾಗುತ್ತಿದ್ದಂತೆ, ಪ್ರತಿ ನಗರ ಮತ್ತು ಗ್ರಾಮಗಳಲ್ಲಿ ನೀರಿನ ಉಳಿತಾಯದ ಸಿದ್ಧತೆಗಳು ಪ್ರಾರಂಭವಾಗುತ್ತವೆ. ಅನೇಕ ರಾಜ್ಯಗಳಲ್ಲಿ, ನೀರು ಕೊಯ್ಲು ಮತ್ತು ನೀರಿನ ಸಂರಕ್ಷಣೆಗೆ ಸಂಬಂಧಿಸಿದ ಕೆಲಸಗಳು ಹೊಸ ವೇಗ ಪಡೆದುಕೊಂಡಿವೆ. ಜಲಶಕ್ತಿ ಸಚಿವಾಲಯ ಮತ್ತು ವಿವಿಧ ಸರ್ಕಾರೇತರ ಸಂಸ್ಥೆಗಳು ಈ ನಿಟ್ಟಿನಲ್ಲಿ ಕೆಲಸ ಮಾಡುತ್ತಿವೆ. ಪ್ರತಿ ವರ್ಷದಂತೆ ಈ ಬಾರಿಯೂ 'catch the rain' ಅಭಿಯಾನ ಹಾಗೂ 'ಜಲ್ ಸಂಚಯ್ ಜನ ಭಾಗಿದಾರಿ' ಅಭಿಯಾನಕ್ಕೆ ಸಿದ್ಧತೆಗಳು ಭರದಿಂದ ಸಾಗಿವೆ. ನಮ್ಮಲ್ಲಿರುವ ನೈಸರ್ಗಿಕ ಸಂಪನ್ಮೂಲಗಳನ್ನು ಮುಂದಿನ ಪೀಳಿಗೆಗೆ ಸುರಕ್ಷಿತವಾಗಿ ವರ್ಗಾಯಿಸುವ ಹೊಣೆ ನಮ್ಮದಾಗಿದೆ ಎಂದರು.

ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಗದಗ ಜಿಲ್ಲೆಯ ಜನರು ರೂಪಿಸಿರುವ ಒಂದು ಮಾದರಿ ಕುರಿತು ಮಾಹಿತಿ ಹಂಚಿಕೊಂಡ ಪ್ರಧಾನಿ, ಕೆಲವು ವರ್ಷಗಳ ಹಿಂದೆ, ಇಲ್ಲಿನ ಎರಡು ಹಳ್ಳಿಗಳ ಕೆರೆಗಳು ಸಂಪೂರ್ಣವಾಗಿ ಬತ್ತಿಹೋಗಿದ್ದವು. ಪ್ರಾಣಿಗಳಿಗೂ ಕುಡಿಯಲು ನೀರು ಇಲ್ಲದಂತಾಗಿತ್ತು. ಕ್ರಮೇಣ ಆ ಕೆರೆ, ಹುಲ್ಲು ಮತ್ತು ಕಸಕಡ್ಡಿಗಳಿಂದ ತುಂಬಿಹೋಯಿತು. ಆದರೆ ಕೆಲವು ಗ್ರಾಮಸ್ಥರು, 'ಮನಸ್ಸಿದ್ದಲ್ಲಿ ಮಾರ್ಗ' ಎಂಬ ಮಾತಿನಂತೆ ಕೆರೆಯನ್ನು ಪುನರುಜ್ಜೀವನಗೊಳಿಸಲು ನಿರ್ಧರಿಸಿ, ಕಾರ್ಯ ಪ್ರವೃತ್ತರಾದರು. ಗ್ರಾಮಸ್ಥರ ಈ ಪ್ರಯತ್ನವನ್ನು ನೋಡಿ, ಸುತ್ತಮುತ್ತಲ ಸಾಮಾಜಿಕ ಸಂಸ್ಥೆಗಳು ಸಹ ಅವರೊಂದಿಗೆ ಕೈಜೋಡಿಸಿದವು. ಎಲ್ಲರೂ ಒಗ್ಗೂಡಿ ಕಸಕಡ್ಡಿ ಸ್ವಚ್ಛಗೊಳಿಸಿ, ಹೂಳೆತ್ತುವ ಕೆಲಸ ಮಾಡಿದರು. ಕೆಲ ಸಮಯದ ನಂತರ ಕೆರೆ ಪ್ರದೇಶವು ಪುನರುಜ್ಜೀನಗೊಂಡಿತು ಎಂದು ಶ್ಲಾಘಿಸಿದರು.

ನಿಜಕ್ಕೂ, ಇದು '`catch the rain' ಅಭಿಯಾನದ ಒಂದು ಉತ್ತಮ ಉದಾಹರಣೆಯಾಗಿದೆ. ನೀವು ಕೂಡ ಸಮುದಾಯ ಮಟ್ಟದಲ್ಲಿ ಇಂತಹ ಪ್ರಯತ್ನಗಳಿಗೆ ಕೈಜೋಡಿಸಬಹುದು. ನಿಮ್ಮ ಮನೆಯ ಛಾವಣಿ ಅಥವಾ ಅಂಗಳದಲ್ಲಿ ಪಕ್ಷಿಗಳಿಗೆ ನೀರನ್ನು ಇರಿಸಿ ಎಂದು ಅವರು ಸಲಹೆ ನೀಡಿದರು.

'ಜವಳಿ ತ್ಯಾಜ್ಯ'. ಸವಾಲಿನ ಬಗ್ಗೆ ಮಾತನಾಡಿದ ಪ್ರಧಾನಿ, ವಾಸ್ತವದಲ್ಲಿ ಜವಳಿ ತ್ಯಾಜ್ಯ ಇಡೀ ವಿಶ್ವಕ್ಕೆ ಒಂದು ಹೊಸ ಚಿಂತೆಗೆ ಪ್ರಮುಖ ಕಾರಣವಾಗಿದೆ. ಇತ್ತೀಚಿನ ದಿನಗಳಲ್ಲಿ ನೀವು ಧರಿಸದೇ ಬಿಟ್ಟ ಹಳೆಯ ಬಟ್ಟೆಗಳು ಜವಳಿ ತ್ಯಾಜ್ಯವಾಗಿ ಮಾರ್ಪಾಡಾಗುತ್ತಿವೆ. ಈ ವಿಷಯದ ಬಗ್ಗೆ ಅನೇಕ ಜಾಗತಿಕ ಸಂಶೋಧನೆಗಳು ನಡೆಯುತ್ತಿದ್ದು, ವಿಶ್ವದಲ್ಲಿ ಅತ್ಯಂತ ಹೆಚ್ಚು ಜವಳಿ ತ್ಯಾಜ್ಯ ಹೊರಬೀಳುವ ದೇಶಗಳ ಪೈಕಿ ಭಾರತ ಮೂರನೇ ಸ್ಥಾನದಲ್ಲಿದೆ.

ದೇಶದಲ್ಲಿ ಇಂತಹ ಸವಾಲುಗಳನ್ನು ಎದುರಿಸಲು ಅನೇಕ ಶ್ಲಾಘನೀಯ ಪ್ರಯತ್ನಗಳು ನಡೆಯುತ್ತಿವೆ ಎನ್ನುವುದರ ಬಗ್ಗೆ ಸಂತಸ ವ್ಯಕ್ತಪಡಿಸಿದರು.

ಅನೇಕ ಭಾರತೀಯ ನವೋದ್ಯಮಗಳು textile recovery facilities ಕುರಿತು ಕೆಲಸ ಆರಂಭಿಸಿವೆ. ಕೆಲವು ನಗರಗಳು ಜವಳಿ ತ್ಯಾಜ್ಯವನ್ನು ನಿರ್ವಹಿಸುವಲ್ಲಿ ತಮ್ಮದೇ ಆದ ಗುರುತು ಮೂಡಿಸುತ್ತಿವೆ. ಬೆಂಗಳೂರು ನಗರ ಹಾಗೂ ಹರಿಯಾಣಾದ ಪಾನಿಪತ್, ಆವಿಷ್ಕಾರಕ ತಂತ್ರಜ್ಞಾನ ಪರಿಹಾರಗಳಿಂದ ತನ್ನದೇ ಆದ ಗುರುತು ಮೂಡಿಸುತ್ತಿದೆ. ಇಲ್ಲಿ ಅರ್ಧಕ್ಕಿಂತ ಹೆಚ್ಚು ಜವಳಿ ತ್ಯಾಜ್ಯವನ್ನು ಸಂಗ್ರಹಿಸಲಾಗುತ್ತಿದ್ದು, ಇದು ಮಾದರಿ ನಡೆಯಾಗಿದೆ ಎಂದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೩೩ ಸೆಕೆಂಡ್ಸ್)

ದೇಹದ ಸದೃಢತೆ ನಿರ್ವಹಣೆಯಲ್ಲಿ ಕ್ಯಾಲೋರಿ ಎಣಿಕೆಯ ಪಾತ್ರ ಬಹಳ ದೊಡ್ಡದಾಗಿದೆ. ಈ ನಿಟ್ಟಿನಲ್ಲಿ ೧೦ ವರ್ಷಗಳ ಹಿಂದೆ ೨೦೧೫ ರ ಜೂನ್ ೨೧ ರಂದು ಪ್ರಥಮ ಯೋಗ ದಿನ ಆಚರಿಸಲಾಯಿತು. ಈಗಂತೂ ಈ ದಿನವು ಯೋಗದ ಬೃಹತ್ ಉತ್ಸವದ ರೂಪವನ್ನು ಪಡೆದುಕೊಂಡಿದೆ. 'ಒಂದು ಭೂಮಿ, ಒಂದು ಆರೋಗ್ಯಕ್ಕಾಗಿ ಯೋಗ' ಎಂಬ ಘೋಷವಾಕ್ಯದೊಂದಿಗೆ ೨೦೨೫ ರ ಯೋಗ ದಿನವನ್ನು ಆಚರಿಸಲಾಗುವುದು ಎಂದು ತಿಳಿಸಿದರು.

ಜನತೆಗೆ ಎಂದಿನಂತೆಯೇ ಚಿಂತನೆಗಳು, ಅನುಭವಗಳು ಮತ್ತು ಮಾಹಿತಿಯನ್ನು ತಮ್ಮೊಂದಿಗೆ ಹಂಚಿಕೊಳ್ಳುವಂತೆ ಕೋರಿದ ಪ್ರಧಾನಿ ನರೇಂದ್ರ ಮೋದಿ, ಮುಂದಿನ ಬಾರಿ ಪ್ರೇರಣೆ ತುಂಬುವಂತಹ ದೇಶವಾಸಿಗಳ ವಿಷಯಗಳೊಂದಿಗೆ ಬರುವುದಾಗಿ ತಿಳಿಸಿದರು.

****************

ಪ್ರಧಾನ ಮಂತ್ರಿ ನರೇಂದ್ರ ಮೋದಿ, ಮಹಾರಾಷ್ಟ್ರದ ನಾಗ್ಪುರದಲ್ಲಿಂದು ಉನ್ನತ ದರ್ಜೆಯ ಮಾಧವ್ ನೇತ್ರಾಲಯ ಕೇಂದ್ರಕ್ಕೆ ಶಂಕುಸ್ಥಾಪನೆ ನೆರವೇರಿಸಿದರು.

ಇದು, ಮಾಧವ ನೇತ್ರಾಲಯ ಕಣ್ಣಿನ ಸಂಸ್ಥೆ ಮತ್ತು ಸಂಶೋಧನಾ ಕೇಂದ್ರದ ಹೊಸ ವಿಸ್ತೃತ ಕಟ್ಟಡವಾಗಿದೆ. ಇದಲ್ಲದೆ, ಪ್ರಧಾನಿಯವರು ನಗರದ ಸೋಲಾರ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಲಿಮಿಟೆಡ್‌ನಲ್ಲಿ ಯುಎವಿಗಳಿಗಾಗಿ ಲಾಯ್ಟರಿಂಗ್ ಮ್ಯೂನಿಷನ್ ಪರೀಕ್ಷಾ ಶ್ರೇಣಿ ಮತ್ತು ರನ್‌ವೇ ಸೌಲಭ್ಯವನ್ನು ಉದ್ಘಾಟಿಸಲಿದ್ದಾರೆ.

ಪ್ರಧಾನಿಯವರು ಇಂದು ಬೆಳಿಗ್ಗೆ ನಾಗ್ಪುರದಲ್ಲಿನ ಸ್ಮೃತಿ ಮಂದಿರಕ್ಕೂ ಭೇಟಿ ನೀಡಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಸ್ಥಾಪಕ ಪಿತಾಮಹರಾದ ಡಾ. ಕೇಶವ್ ಹೆಡ್ಗೆವಾರ್ ಮತ್ತು ಗುರೂಜಿ ಎಂದೇ ಜನಪ್ರಿಯರಾಗಿರುವ ಮಾಧವರಾವ್ ಗೋಲ್ವಾಲ್ಕರ್ ಅವರ ಸ್ಮಾರಕಗಳಿಗೆ ಗೌರವ ವಂದನೆ ಸಲ್ಲಿಸಿದರು.

****************

ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿದ್ದು, ವಿಶಾಖಪಟ್ಟಣದಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ, ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಎದುರಿಸಲಿದೆ. ಪಂದ್ಯ ಅಪರಾಹ್ನ ೩.೩೦ ಕ್ಕೆ ಆರಂಭವಾಗಲಿದೆ.
ಗುವಾಹಟಿಯಲ್ಲಿ ನಡೆಯಲಿರುವ ಮತ್ತೊಂದು ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ ಕ್ಕೆ ಪ್ರಾಂಭವಾಗಲಿದೆ.

********ಮುಕ್ತಾಯ*******